ದೂರವಾಣಿ ಸಂಖ್ಯೆ: 080-22212343
ಫ್ಯಾಕ್ಸ್ ಸಂಖ್ಯೆ: 080-22278803
ಅಂತರ್ಜಾಲ: https://kptcl.karnataka.gov.in/
ಮಿಂಚಂಚೆ: director.ahr.kptcl@gmail.com

# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

Corporate Identity Number (CIN): U40109KA1999SGC025521

(ಕಂಪನಿಯ ಅಧಿಕೃತ ಕಚೇರಿ: ನಿಗಮ ಕಾರ್ಯಾಲಯ, ಕಾವೇರಿ ಭವನ, ಕೆ.ಜಿ.ರಸ್ತೆ, ಬೆಂಗಳೂರು-560 009)

---

ವಿಷಯ: ಪ್ರಭಾರ ಭತ್ಯೆ ದರವನ್ನು ಪರಿಷ್ಕರಿಸುವ ಬಗ್ಗೆ

*****

**ಓದಲಾಗಿದೆ:-**

1. ಸರ್ಕಾರದ ಆದೇಶ ಸಂಖ್ಯೆ: ಎಫ್ ಡಿ 08 ಎಸ್ ಆರ್ ಎಸ್ 2018, ದಿನಾಂಕ: 30.04.2019.
2. ನಿಗಮದ ಆದೇಶ ಸಂಖ್ಯೆ: ಕವಿಪ್ರನಿನಿ/ಬಿ16/780/2019-20, ದಿನಾಂಕ: 20.05.2019.
3. ಸರ್ಕಾರದ ಆದೇಶ ಸಂಖ್ಯೆ: ಎಫ್ ಡಿ 14(ಇ) ಎಸ್ ಆರ್ ಎಸ್ 2022, ದಿನಾಂಕ: 23.09.2022.
4. ಮಾನ್ಯ ವ್ಯವಸ್ಥಾಪಕ ನಿರ್ದೇಶಕರು, ಕವಿಪ್ರನಿನಿ ಇವರಿಂದ ಅನುಮೋದಿಸಲ್ಪಟ್ಟ ಟಿಪ್ಪಣಿ ದಿನಾಂಕ: 19.10.2022.

**ಪೀಠಿಕೆ:-**

ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಯ ನಿಯಮ 38 ಮತ್ತು 68 ರ ಅಡಿಯಲ್ಲಿ, ನೌಕರರನ್ನು ಸ್ವತಂತ್ರ ಪ್ರಭಾರದಲ್ಲಾಗಲೀ ಅಥವಾ ತಮ್ಮ ಹುದ್ದೆಯ ಕರ್ತವ್ಯದ ಜೊತೆ ಬೇರೊಂದು ಹುದ್ದೆಯ ಹೆಚ್ಚಿನ ಪ್ರಭಾರದಲ್ಲಿರಿಸಿದಾಗ, ಪ್ರಭಾರದಲ್ಲಿರಿಸಿದ ಹುದ್ದೆಯ ವೇತನ ಶ್ರೇಣಿಯ ಕನಿಷ್ಠ ಹಂತದಲ್ಲಿ ಮೊದಲ ಮೂರು ತಿಂಗಳವರೆಗೆ ಶೇಕಡ 7.5 ರ ದರದಲ್ಲಿ, ಆ ನಂತರದ ಮೂರು ತಿಂಗಳಿಗಿಂತ ಹೆಚ್ಚಿನ ಅವಧಿಗೆ ಶೇಕಡ 15 ರ ದರದಲ್ಲಿ ಪ್ರಭಾರ ಭತ್ಯೆಯ ದರವನ್ನು ನಿಗದಿಪಡಿಸಿ, ಸರ್ಕಾರವು ಆದೇಶ ಸಂಖ್ಯೆ: ಎಫ್ ಡಿ 08 ಎಸ್ ಆರ್ ಎಸ್ 2018, ದಿನಾಂಕ: 30.04.2019 ನ್ನು ಹೊರಡಿಸಿರುತ್ತದೆ. ಸರ್ಕಾರದ ಸದರಿ ಆದೇಶವನ್ನು ಉಲ್ಲೇಖ-2 ರ ಆದೇಶದನ್ವಯ ನಿಗಮದಲ್ಲಿ ಅಳವಡಿಸಿಕೊಳ್ಳಲಾಗಿತ್ತು.

ಪ್ರಸ್ತುತ, ಸರ್ಕಾರದ ಇಲಾಖೆಗಳಲ್ಲಿ ಸಾಕಷ್ಟು ಹುದ್ದೆಗಳು ಖಾಲಿ ಇದ್ದು, ಸುಗಮ ಆಡಳಿತಕ್ಕಾಗಿ ಹಲವಾರು ಸಿಬ್ಬಂದಿಗಳನ್ನು ಒಂದಕ್ಕಿಂತ ಹೆಚ್ಚಿನ ಹುದ್ದೆಗಳಲ್ಲಿ ಅಧಿಕ ಪ್ರಭಾರ/ಸಮವರ್ತಿ ಪ್ರಭಾರದಲ್ಲಿರಿಸಲಾಗಿದ್ದು, ಸದರಿಯವರುಗಳು ಹೆಚ್ಚಿನ ಕಾರ್ಯಭಾರದ ಒತ್ತಡದಲ್ಲಿ ಕಾರ್ಯನಿರ್ವಹಿಸುತ್ತಿರುತ್ತಾರೆ. ಈ ಅಧಿಕಾರಿ/ನೌಕರರಿಗೆ ಪ್ರಭಾರ ಭತ್ಯೆ ಮಂಜೂರು ಮಾಡಲು ಅನುಸರಿಸುತ್ತಿರುವ ಕಾರ್ಯವಿಧಾನದ ಜಟಿಲತೆಯನ್ನು ಸರಳಗೊಳಿಸುವ ನಿಟ್ಟಿನಲ್ಲಿ, ಎರಡು ಹಂತಗಳಲ್ಲಿ ನೀಡಲಾಗುತ್ತಿರುವ ಪ್ರಭಾರ ಭತ್ಯೆಯನ್ನು ವಿಲೀನಗೊಳಿಸಿ, ಒಂದೇ ಹಂತದಲ್ಲಿ ಪ್ರಭಾರ ಭತ್ಯೆಯನ್ನು ನೀಡುವ ಪ್ರಸ್ತಾವನೆಯನ್ನು ಪರಿಶೀಲಿಸಿ, ಸರ್ಕಾರಿ ಅಧಿಕಾರಿ/ನೌಕರರನ್ನು ಸ್ವತಂತ್ರ

ಪ್ರಭಾರದಲ್ಲಿ ಅಥವಾ ತಮ್ಮ ಹುದ್ದೆಯ ಕರ್ತವ್ಯದ ಜೊತೆ ಬೇರೊಂದು ಹುದ್ದೆಯ ಹೆಚ್ಚಿನ ಪ್ರಭಾರದಲ್ಲಿರಿಸಿದ ಸಂದರ್ಭದಲ್ಲಿ, ಅಂತಹ ಪ್ರಭಾರದಲ್ಲಿರಿಸಿದ ಅಧಿಕಾರಿ/ನೌಕರರ ಮೂಲ ವೇತನದ ಶೇಕಡ 15 ರ ದರದಲ್ಲಿ ಪ್ರಭಾರ ಭತ್ಯೆಯನ್ನು ನಿಗದಿಪಡಿಸಿ, ಸರ್ಕಾರವು ದಿನಾಂಕ: 23.09.2022 ರ ಆದೇಶವನ್ನು ಹೊರಡಿಸಿರುತ್ತದೆ. ಸರ್ಕಾರದ ಸದರಿ ಆದೇಶವನ್ನು ನಿಗಮದಲ್ಲಿ ಅಳವಡಿಸಿಕೊಂಡು, ಈ ಕೆಳಕಂಡಂತೆ ಆದೇಶಿಸಿದೆ:-

**ನಿಗಮದ ಆದೇಶ ಸಂಖ್ಯೆ: ಕವಿಪ್ರನಿನಿ/ಬಿ16/780/2019-20, ಬೆಂಗಳೂರು, ದಿನಾಂಕ:** 29 OCT 2022

ಕವಿಪ್ರನಿನಿ ನೌಕರರ ಸೇವಾ ನಿಬಂಧನೆಗಳ ನಿಬಂಧನೆ-35 ಮತ್ತು 51 ರಂತೆ ನಿಗಮದ ಅಧಿಕಾರಿ/ನೌಕರರನ್ನು ಸ್ವತಂತ್ರ ಪ್ರಭಾರದಲ್ಲಾಗಲೀ ಅಥವಾ ತಮ್ಮ ಹುದ್ದೆಯ ಕರ್ತವ್ಯದ ಜೊತೆ ಬೇರೊಂದು ಹುದ್ದೆಯ ಹೆಚ್ಚಿನ ಪ್ರಭಾರದಲ್ಲಿರಿಸಿದ ಸಂದರ್ಭದಲ್ಲಿ, ಅಂತಹ **ಪ್ರಭಾರದಲ್ಲಿರಿಸಿದ ಅಧಿಕಾರಿ/ನೌಕರರ ಮೂಲ ವೇತನದ ಶೇಕಡ 15 (ಹದಿನೈದು)** ರ ದರದಲ್ಲಿ ಪ್ರಭಾರ ಭತ್ಯೆಯನ್ನು ನಿಗದಿಪಡಿಸಿ ಆದೇಶಿಸಲಾಗಿದೆ.

ಕವಿಪ್ರನಿನಿ ನೌಕರರ ಸೇವಾ ನಿಬಂಧನೆಗಳ ನಿಬಂಧನೆ-35 ಮತ್ತು 51, ಮೇಲಿನಂತೆ ತಿದ್ದುಪಡಿಯಾಗಿರುತ್ತದೆ ಹಾಗೂ ಪ್ರಭಾರ ಭತ್ಯೆಯನ್ನು ಪಾವತಿಸುವ ವಿಷಯದಲ್ಲಿನ ಇತರೆ ನಿಯಮ ಮತ್ತು ಷರತ್ತುಗಳು ಯಥಾವತ್ತಾಗಿ ಮುಂದುವರೆಯುತ್ತವೆ.

ಪ್ರಭಾರ ಭತ್ಯೆಯ ಪರಿಷ್ಕೃತ ದರ ದಿನಾಂಕ: 01.09.2022 ರಿಂದ ಜಾರಿಗೆ ಬರುತ್ತದೆ.

ನಿರ್ದೇಶಕರು

**(ಆಡಳಿತ ಮತ್ತು ಮಾನವ ಸಂಪನ್ಮೂಲ)**

**ಗೆ:**

1. ವ್ಯವಸ್ಥಾಪಕ ನಿರ್ದೇಶಕರು, ಬೆಸ್ಕಾಂ/ಜೆಸ್ಕಾಂ/ಹೆಸ್ಕಾಂ/ಮೆಸ್ಕಾಂ/ಸೆಸ್ಕ್/ಪಿ.ಸಿ.ಕೆ.ಎಲ್.
2. ಎಲ್ಲಾ ನಿರ್ದೇಶಕರು (ತಾಂತ್ರಿಕ), ಎಸ್ಕಾಂಗಳು.
3. ಎಲ್ಲಾ ಆರ್ಥಿಕ ಸಲಹೆಗಾರರು, ಕವಿಪ್ರನಿನಿ/ಎಸ್ಕಾಂಗಳು.
4. ಎಲ್ಲಾ ಮುಖ್ಯ ಇಂಜಿನಿಯರ್(ವಿ), ಕವಿಪ್ರನಿನಿ/ಎಸ್ಕಾಂಗಳು.
5. ಹಿರಿಯ ಆಪ್ತ ಕಾರ್ಯದರ್ಶಿಗಳು, ವ್ಯವಸ್ಥಾಪಕ ನಿರ್ದೇಶಕರು/ನಿರ್ದೇಶಕರು(ಪ್ರಸರಣ)/ನಿರ್ದೇಶಕರು(ಹಣಕಾಸು)/ ನಿರ್ದೇಶಕರು(ಆಡಳಿತ ಮತ್ತು ಮಾನವ ಸಂಪನ್ಮೂಲ), ಕವಿಪ್ರನಿನಿ.

   https://kptcl.karnataka.gov.in for information of:
6. ಎಲ್ಲಾ ಅಧೀಕ್ಷಕ ಇಂಜಿನಿಯರ್(ವಿ)/ನಿಯಂತ್ರಣಾಧಿಕಾರಿಗಳು, ಕವಿಪ್ರನಿನಿ/ಎಸ್ಕಾಂಗಳು.
7. ಎಲ್ಲಾ ಕಾರ್ಯನಿರ್ವಾಹಕ ಇಂಜಿನಿಯರ್(ವಿ)/ಉಪ ಲೆಕ್ಕ ನಿಯಂತ್ರಣಾಧಿಕಾರಿಗಳು, ಕವಿಪ್ರನಿನಿ/ಎಸ್ಕಾಂಗಳು

8. ಎಲ್ಲಾ ಅಧಿಕಾರಿಗಳು, ನಿಗಮ ಕಾರ್ಯಾಲಯ, ಕವಿಪ್ರನಿನಿ, ಕಾವೇರಿ ಭವನ, ಬೆಂಗಳೂರು.

**ಪ್ರತಿಯನ್ನು ಮಾಹಿತಿಗಾಗಿ ರವಾನಿಸಿದೆ:-**

1. ಶ್ರೀ.ಆರ್.ಹೆಚ್.ಲಕ್ಷ್ಮೀಪತಿ, ಅಧ್ಯಕ್ಷರು, ಕವಿಪ್ರನಿ ನೌಕರರ ಸಂಘ (ನೋಂ.ಸಂ: 659), ಬೆಂಗಳೂರು ಮತ್ತು ನಿರ್ದೇಶಕರು, ಕವಿಪ್ರನಿನಿ ಹಾಗೂ ಎಲ್ಲಾ ಎಸ್ಕಾಂಗಳು.
2. ಅಧ್ಯಕ್ಷರು, ಕವಿಮಂ ಇಂಜಿನಿಯರುಗಳ ಸಂಘ, ಬೆಂಗಳೂರು ಮತ್ತು ನಿರ್ದೇಶಕರು, ಕವಿಪ್ರನಿನಿ ಹಾಗೂ ಎಲ್ಲಾ ಎಸ್ಕಾಂಗಳು.
3. ಪ್ರಧಾನ ಕಾರ್ಯದರ್ಶಿ, ಕವಿಪ್ರನಿ ನೌಕರರ ಸಂಘ (ನೋಂ.ಸಂ: 659), ಬೆಂಗಳೂರು.
4. ಪ್ರಧಾನ ಕಾರ್ಯದರ್ಶಿ, ಕವಿಮಂ ಇಂಜಿನಿಯರುಗಳ ಸಂಘ, ಬೆಂಗಳೂರು.
5. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ ಲೆಕ್ಕಾಧಿಕಾರಿಗಳ ಸಂಘ, ಬೆಂಗಳೂರು.
6. ಪ್ರಧಾನ ಕಾರ್ಯದರ್ಶಿ, ಕವಿಮಂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣ ಸಂಸ್ಥೆ (ರಿ), ಬೆಂಗಳೂರು.
7. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ ಡಿಪ್ಲೊಮಾ ಇಂಜಿನಿಯರುಗಳ ಸಂಘ, ಬೆಂಗಳೂರು.
8. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ /ಎಸ್ಕಾಂ ಪ.ಜಾ/ಪ.ಪಂ ಅಧಿಕಾರಿಗಳ ಸಂಘ, ಬೆಂಗಳೂರು.
9. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ ಪಿಂಚಣಿದಾರರ ಸಂಘ, ಕಾವೇರಿ ಭವನ, ಬೆಂಗಳೂರು.